**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ದಾವಣಗೆರೆ.**

**SC.148/2020**

| | | |
|---|---|---|
| ಸಾಕ್ಷಿದಾರರ ಹೆಸರು | : | ಕೆ. ಆರ್. ದೇವರಾಜ |
| ತಂದೆಯ/ಗಂಡನ ಹೆಸರು | : | ರಂಗಪ್ಪ |
| ವಯಸ್ಸು | : | 56 ವರ್ಷ |
| ಉದ್ಯೋಗ | : | ತಹಶೀಲ್ದಾರ ಗ್ರೇಡ್ -2 , ದಾವಣಗೆರೆ |
| ವಾಸ ಸ್ಥಳ | : | ದಾವಣಗೆರೆ |

ಪಿ.ಡಬ್ಲ್ಯೂ 7

ಸಿ.ಡಬ್ಲ್ಯೂ 25

ದಿ: 18-02-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ (ಮಂಜುನಾಥ ಬಿ)**:

1. ದಿಃ 22-01-2018 ರಿಂದ ಇಲ್ಲಿಯವರೆಗೆ ನಾನು ದಾವಣಗೆರೆಯಲ್ಲಿ ತಹಶೀಲ್ದಾರ ಅಂತ ಕಾರ್ಯ ನಿರ್ವಹಿಸುತ್ತಿದ್ದೇನೆ. ಈ ಪ್ರಕರಣದಲ್ಲಿ ದಿಃ 26-05-2020 ರಂದು ಶಂಕರಹಳ್ಳಿಯ ಕಲ್ಲು ಕ್ವಾರಿಯ ಬಗ್ಗೆ ಪಂಚನಾಮೆ ಮಾಡಲು ಇಬ್ಬರು ಪಂಚರನ್ನು ನೇಮಿಸಿಕೊಡಬೇಕು ಅಂತ ದಾವಣಗೆರೆ ಗ್ರಾಮಾಂತರ ವೃತ್ತ ನಿರೀಕ್ಷಕರು ಮನವಿಯನ್ನು ಸಲ್ಲಿಸಿದ್ದರು. ಅದರಂತೆ ನಾನು ಕೊಟ್ರಪ್ಪ ಮತ್ತು ಉಮೇಶ ಅಂದರೆ ಚಾಸಾ-2 ಮತ್ತು 3 ರವರನ್ನು ಪಂಚರಾಗಿ ನೇಮಿಸಿ ವರದಿಯನ್ನು ಸಲ್ಲಿಸಿರುತ್ತೇನೆ. ಮನವಿ ಪತ್ರ ಮತ್ತು ನಾನು ಕೊಟ್ಟ ವರದಿಯನ್ನು ಈಗ ನೋಡುತ್ತಿದ್ದು, ಅವುಗಳನ್ನು ಕ್ರಮವಾಗಿ ನಿಪಿ-10 ಮತ್ತು 11 ಅಂತ ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಇ.ಎಫ್., ವಕೀಲರಿಂದ ಆರೋಪಿತರ ಪರವಾಗಿ**:

2. ಪಂಚರಿಗೆ ಪಂಚರಾಗಿ ಹೋಗಬೇಕು ಅಂತ ನಾನು ಬರವಣಿಗೆಯಲ್ಲಿ ಕೊಟ್ಟಿರುವುದಿಲ್ಲ. ಪಂಚರಿಗೆ ಯಾವ ಸ್ಥಳಕ್ಕೆ ಹೋಗಬೇಕು ಅಂತ ನಾನು ಆದೇಶ ಮಾಡಿಲ್ಲ.

**ಮರುವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓದಿ, ಹೇಳಿ, ಕೇಳಿ, ಸರಿ ಇದೆ.

Sd/-
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ.